ಕರ್ನಾಟಕ ವಿಧಾನಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 24-03-2021 ಪ್ರಶ್ನೆ ಸಂಖ್ಯೆ : 1756 (1995)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರ ನೀಡಬೇಕಾದ ದಿನಾಂಕ : 24-03-2021

ಉತ್ತರಿಸುವ ಸಚಿವರು: ಮಾನ್ಯ ಕಂದಾಯ ಸಚಿವರು

ವಿಷಯ : ಸರ್ಕಾರಿ ಜಾಗದ ಅಕ್ರಮ ಒತ್ತುವರಿ ಕುರಿತು

(ಅ) ಬೆಂಗಳೂರು ನಗರ ಜಿಲ್ಲೆಯ ಬೆಂಗಳೂರು ದಕ್ಷಿಣ ತಾಲ್ಲೂಕಿನ ಬೇಗೂರು ಹೋಬಳಿಯ ಹುಳಿಮಾವು ಗ್ರಾಮದ ಸರ್ವೆ ನಂ. 63 ರಲ್ಲಿ 5 ಎಕರೆ ಸ್ಥಳವನ್ನು ಇಸ್ಲಾಮಿಯಾ ಇನ್ಸ್‌ಟಿಟ್ಯೂಟ್ ಆಫ್ ಟೆಕ್ನಾಲಜಿ ಕಾಲೇಜು ಶಿಕ್ಷಣ ಸಂಸ್ಥೆಯವರು ಎಂದಿನಿಂದ ಅಕ್ರಮವಾಗಿ ಒತ್ತುವರಿ ಮಾಡಿಕೊಂಡಿರುತ್ತಾರೆ; ಅಕ್ರಮ ಒತ್ತುವರಿ ಕುರಿತು ಸರ್ಕಾರಕ್ಕೆ ಯಾವ ದಿನಾಂಕದಂದು ಮಾಹಿತಿ ಬಂದಿದೆ; (ವಿವರ ನೀಡುವುದು)

(ಆ) ಸದರಿ ಸ್ಥಳವನ್ನು ಅಕ್ರಮವಾಗಿ ಇಸ್ಲಾಮಿಯಾ ಇನ್ಸ್‌ಟಿಟ್ಯೂಟ್ ಆಫ್ ಟೆಕ್ನಾಲಜಿ ಕಾಲೇಜು ಶಿಕ್ಷಣ ಸಂಸ್ಥೆಯವರು ಒತ್ತುವರಿ ಮಾಡಿದ ದಿನಾಂಕದಿಂದ ಇಂದಿನವರೆಗೆ ಆ ಸ್ಥಳದ ಅಧಿಕಾರ ವ್ಯಾಪ್ತಿಯನ್ನು ಹೊಂದಿದ್ದ ತಹಶೀಲ್ದಾರ್, ಎ.ಸಿ., ಮತ್ತು ಜಿಲ್ಲಾಧಿಕಾರಿಗಳು ಯಾರು ; (ಹೆಸರು ಮತ್ತು ಸದರಿಯವರು ಕರ್ತವ್ಯ ನಿರ್ವಹಿಸಿದ ಅವಧಿಯೊಂದಿಗೆ ವಿವರ ನೀಡುವುದು)

(ಇ) ಸದರಿ ಸ್ಥಳವನ್ನು ಅಕ್ರಮವಾಗಿ ಇಸ್ಲಾಮಿಯಾ ಇನ್ಸ್‌ಟಿಟ್ಯೂಟ್ ಆಫ್ ಟೆಕ್ನಾಲಜಿ ಕಾಲೇಜು ಶಿಕ್ಷಣ ಸಂಸ್ಥೆಯವರು ಒತ್ತುವರಿ ಮಾಡಿದ ದಿನಾಂಕದಿಂದ ಇಂದಿನವರೆಗೆ ಆ ಸ್ಥಳದ ಅಧಿಕಾರ ವ್ಯಾಪ್ತಿಯನ್ನು ಹೊಂದಿದ್ದ ತಹಶೀಲ್ದಾರ್, ಎ.ಸಿ., ಮತ್ತು ಜಿಲ್ಲಾಧಿಕಾರಿಗಳು ಸದರಿ ಅಕ್ರಮ ಒತ್ತುವರಿಯನ್ನು ತೆರವುಗೊಳಿಸಲು ಕೈಗೊಂಡ ಕ್ರಮಗಳ ಕುರಿತು ಅಗತ್ಯ ಮಾಹಿತಿ ನೀಡುವುದು?